# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತೈದನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಬುಧವಾರ, ದಿನಾಂಕ:19ನೇ ಮಾರ್ಚ್, 2025**

**(ಸಮಯ: ಬೆಳಗ್ಗೆ: 10.30 ಗಂಟೆಗೆ)**

* * *

## 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಹನ್ನೊಂದನೆಯ ಪಟ್ಟಿ

ಆ) **ತಡೆಹಿಡಿಯಲಾದ ಪ್ರಶ್ನೆಗಳು:**

| | |
|---|---|
| 2ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಸಿ.ಟಿ. ರವಿ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 28(126)<br>6ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಕೆ. ಅಬ್ದುಲ್ ಜಬ್ಬರ್** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 90(673) | ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು |
| 6ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಶರವಣ ಟಿ.ಎ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 81(656)<br>8ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಟಿ.ಎನ್. ಜವರಾಯಿ ಗೌಡ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 114(901) | ಮಾನ್ಯ ಕಂದಾಯ ಸಚಿವರು |

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಹನ್ನೊಂದನೆಯ ಪಟ್ಟಿ

## 02. ಶೂನ್ಯವೇಳೆ ಪ್ರಸ್ತಾವಗಳು

## 03. ಸಭೆಯ ಮುಂದಿಡಲಾಗುವ ಕಾಗದ ಪತ್ರ

ಮಾನ್ಯ ಸದಸ್ಯರುಗಳಿಗೆ ಈಗಾಗಲೇ ಒದಗಿಸಲಾಗಿರುವ ಮೂರನೇ ಪಟ್ಟಿಯ ರೀತ್ಯಾ.

## 04. ವರದಿಯನ್ನೊಪ್ಪಿಸುವುದು

**ಶ್ರೀ ಎಂ. ನಾಗರಾಜು (ಅಧ್ಯಕ್ಷರು, ಹಕ್ಕುಬಾಧ್ಯತಾ ಸಮಿತಿ)** ಅವರು ವಿಧಾನ ಪರಿಷತ್ತಿನ 2024-25ನೇ ಸಾಲಿನ ಹಕ್ಕುಬಾಧ್ಯತಾ ಸಮಿತಿಯ 103ನೇ ವರದಿಯನ್ನೊಪ್ಪಿಸುವುದು.

## 05. ಸದನ ಸಮಿತಿ ಕಾಲಾವಕಾಶವನ್ನು ವಿಸ್ತರಿಸಲು ಪ್ರಸ್ತಾವ

**ಶ್ರೀ ಎಸ್.ವ್ಹಿ. ಸಂಕನೂರ (ಸದಸ್ಯರು, ವಿಶೇಷ ಜಂಟಿ ಸದನ ಸಮಿತಿ) ಅವರು:-**

"ರಾಜ್ಯದಲ್ಲಿ 2020-21ನೇ ಸಾಲಿನಲ್ಲಿ ಹೊಸದಾಗಿ ನರ್ಸಿಂಗ್ ಮತ್ತು ಅಲೈಡ್ ಹೆಲ್ತ್ ಸೈನ್ಸಸ್ ಕಾಲೇಜುಗಳಿಗೆ ಮೂಲ ಸೌಕರ್ಯಗಳಿಲ್ಲದಿದ್ದರೂ ಅನುಮತಿ ನೀಡಿ, ಇಂಡಿಯನ್ ನರ್ಸಿಂಗ್ ಕೌನ್ಸಿಲ್ ಅವರು ಹೊರಡಿಸಿರುವ ಮಾರ್ಗಸೂಚಿಗಳನ್ನು ಉಲ್ಲಂಘಿಸಿರುವ ವಿಷಯವನ್ನು ಪರಿಶೀಲಿಸಿ ವರದಿಯನ್ನು ಸಲ್ಲಿಸಲು ರಚಿಸಲಾಗಿರುವ ವಿಶೇಷ ಜಂಟಿ ಸದನ ಸಮಿತಿಯ ಅವಧಿಯನ್ನು ದಿನಾಂಕ:14.01.2025ರಿಂದ 13.07.2025ರವರೆಗೆ ಸದನದ ಸಹಮತಿಯನ್ನು ಕಾಯ್ದಿರಿಸಿ ವಿಸ್ತರಿಸಲಾಗಿರುವ ಪ್ರಸ್ತಾವನೆಗೆ ಸದನದ ಸಹಮತಿ ಕೋರಿ ಪ್ರಸ್ತಾವವನ್ನು ಮಂಡಿಸುವುದು".

## 06. ಹದಿಹರೆಯದ ಮಕ್ಕಳು ಎದುರಿಸುತ್ತಿರುವ ಸಾಮಾನ್ಯ ಸಮಸ್ಯೆಗಳು ಹಾಗೂ ಪರಿಹಾರೋಪಾಯಗಳ ಕುರಿತು ನಡೆದ ವಿಶೇಷ ಚರ್ಚೆಗೆ ಸರ್ಕಾರದಿಂದ ಉತ್ತರ

## 07. ವಿತ್ತೀಯ ಕಾರ್ಯಕಲಾಪ

2025-26ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಸಾಮಾನ್ಯ ಚರ್ಚೆ

**ಎರಡನೇ ದಿನ**

## 08. ಗಮನ ಸೆಳೆಯುವ ಸೂಚನೆಗಳು

೦1. **ಶ್ರೀ ಬಿ.ಜಿ. ಪಾಟೀಲ್** ಅವರು ಕಲಬುರಗಿ ಜಿಲ್ಲೆಯಲ್ಲಿ ಕಳೆದ 15-20 ವರ್ಷಗಳಿಂದ ಹೊರಗುತ್ತಿಗೆ ಆಧಾರದ ಮೇಲೆ ಕೆಲಸ ಮಾಡುತ್ತಿರುವ ನೌಕರರಿಗೆ ಮಾಸಿಕ ವೇತನವನ್ನು ಕನಿಷ್ಠ ರೂ.31,000ಗಳಿಗೆ ನಿಗದಿಪಡಿಸಿ ಅವರನ್ನು ಖಾಯಂ ಮಾಡುವುದರ ಜೊತೆಗೆ ಬೀದರ್ ಮಾದರಿಯಲ್ಲಿ ಸಹಕಾರ ಸಂಘದ ಸೊಸೈಟಿಯನ್ನು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಜಾರಿ ಮಾಡುವ ಕುರಿತು ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

೦2. **ಶ್ರೀ ಎಂ. ನಾಗರಾಜು** ಅವರು "ಕಾಡುಗೊಲ್ಲ" ಜನಾಂಗವನ್ನು ಹಿಂದುಳಿದ ವರ್ಗಗಳ ಪ್ರವರ್ಗ-ಎ ಮತ್ತು ಬಿ ಅಡಿಯಲ್ಲಿ ಸೇರ್ಪಡೆಗೊಳಿಸಿ ಆದೇಶಿಸಲಾಗಿದ್ದು, ಜಾತಿ ಪ್ರಮಾಣ ಪತ್ರ ನೀಡಲು ವಿಳಂಬವಾಗುತ್ತಿರುವ ಕುರಿತು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಗಮನ ಸೆಳೆಯುವುದು.

೦3. **ಶ್ರೀಮತಿ ಭಾರತಿ ಶೆಟ್ಟಿ** ಅವರು ಮಹರ್ಷಿ ವಾಲ್ಮೀಕಿ ಆದಿವಾಸಿ ಬುಡಕಟ್ಟು ವಸತಿ ಶಾಲೆ, ನಾಗರಹೊಳೆ ಶಾಲೆಗೆ ಮೂಲಭೂತ ಸೌಕರ್ಯ ಒದಗಿಸುವುದು ಹಾಗೂ ಸದರಿ ಬುಡಕಟ್ಟು ಜನಾಂಗದ ಬಡ ಮಕ್ಕಳು ಶಿಕ್ಷಣದಿಂದ ವಂಚಿತರಾಗುವುದನ್ನು ತಡೆಗಟ್ಟಲು ಕ್ರಮ ಕೈಗೊಳ್ಳುವ ಕುರಿತು ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

.3..

೦4. **ಶ್ರೀ ಸಿ.ಟಿ. ರವಿ** ಅವರು ಪತಿ-ಪತ್ನಿ ಪ್ರಕರಣದಡಿ ಹೆಡ್ ಕಾನ್‌ಸ್ಟೇಬಲ್‌ಗಳ ವರ್ಗಾವಣೆಗೆ ಸಂಬಂಧಿಸಿದಂತೆ ಈ ಹಿಂದೆ ಹೊರಡಿಸಲಾದ ಮಾರ್ಗಸೂಚಿಯಲ್ಲಿರುವ ಏಳು ವರ್ಷಗಳ ಸೇವೆಯನ್ನು ಪೂರೈಸಿರಬೇಕೆಂಬ ಷರತ್ತನ್ನು ಸಡಿಲಿಕೆ ಮಾಡಿ ವಿಶೇಷ ಪ್ರಕರಣವೆಂದು ಪರಿಗಣಿಸಿ ಹೆಡ್ ಕಾನ್‌ಸ್ಟೇಬಲ್‌ಗಳ ವರ್ಗಾವಣೆಗೆ ಅವಕಾಶ ಕಲ್ಪಿಸುವ ಕುರಿತು ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

## 09. ನಿಯಮ 330ರ ಮೇರೆಗೆ

೦1. **ಮಾನ್ಯ ವಿರೋಧ ಪಕ್ಷದ ನಾಯಕರಾದ ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರಾದ ಶ್ರೀ ಎನ್. ರವಿಕುಮಾರ್, ಮಾನ್ಯ ಶಾಸಕರುಗಳಾದ ಶ್ರೀ ಶಶೀಲ್ ಜಿ. ನಮೋಶಿ, ಡಾ: ತಳವಾರ್ ಸಾಬಣ್ಣ, ಶ್ರೀಮತಿ ಹೇಮಲತಾ ನಾಯಕ್ ಹಾಗೂ ಶ್ರೀ ವೈ.ಎಂ. ಸತೀಶ್** ಅವರುಗಳು ರಾಜ್ಯದಲ್ಲಿ 2024-25ನೇ ಸಾಲಿನಲ್ಲಿ ಮುಂಗಾರು ಮತ್ತು ಹಿಂಗಾರು ಬೆಳೆಗಳ ಅತಿವೃಷ್ಟಿ, ಅನಾವೃಷ್ಟಿ ಮತ್ತು ನೆಟೆ ರೋಗದಿಂದ ತೊಗರಿ ಬೆಳೆ ನಾಶವಾಗಿದ್ದು, ರೈತರು ಸಂಕಷ್ಟಕ್ಕೀಡಾಗಿರುವುದರಿಂದ ತೊಗರಿ ಬೆಳೆಗಾರರಿಗೆ ಬೆಂಬಲ ಬೆಲೆ ನಿಗದಿಪಡಿಸಿ ಕೂಡಲೇ ಪರಿಹಾರ ಒದಗಿಸುವ ಕುರಿತು ಪ್ರಸ್ತಾಪಿಸುವುದು.

೦2. **ಶ್ರೀ ರಾಮೋಜಿಗೌಡ, ಶ್ರೀ ಎಸ್.ವಿ. ಸಂಕನೂರ ಮತ್ತು ಪುಟ್ಟಣ್ಣ** ಅವರುಗಳು ಉನ್ನತ ಶಿಕ್ಷಣ ಪಡೆದು ಪ್ರಾಥಮಿಕ ಶಾಲೆಗಳಲ್ಲಿ ನಿವೃತ್ತಿಯ ಅಂಚಿನಲ್ಲಿರುವ 58 ಸಾವಿರ ಶಿಕ್ಷಕರುಗಳಿಗೆ ಸೇವಾ ಹಿರಿತನದ ಮೇರೆಗೆ ನಿಗದಿತ ಅವಧಿಯಲ್ಲಿ ಮುಂಬಡ್ತಿ ನೀಡುವ ಕುರಿತು ಪ್ರಸ್ತಾಪಿಸುವುದು.

೦3. **ಶ್ರೀಯುತರುಗಳಾದ ಐವನ್ ಡಿ'ಸೋಜಾ, ಮಂಜುನಾಥ್ ಭಂಡಾರಿ, ಬಸನಗೌಡ ಬಾದರ್ಲಿ, ಎಂ. ನಾಗರಾಜು ಹಾಗೂ ಡಾ: ಚಂದ್ರಶೇಖರ ಬಸವರಾಜ ಪಾಟೀಲ** ಅವರುಗಳು ದಕ್ಷಿಣ ಕನ್ನಡ ಮೂಲ್ಕಿ ತಾಲ್ಲೂಕಿನ ಬಳ್ಕುಂಜೆ, ಕೊಲ್ಲೂರು ಮತ್ತು ಉಳೆಪಾಡಿ ಗ್ರಾಮಗಳ 1091 ಎಕರೆ ಪ್ರದೇಶದಲ್ಲಿ ಕೆ.ಐ.ಎ.ಡಿ.ಬಿ.ಯ ಕೈಗಾರಿಕಾ ವಲಯ ನಿರ್ಮಾಣಕ್ಕಾಗಿ ಸರ್ಕಾರ ಹೊರಡಿಸಿರುವ 28(1) ಅಧಿಸೂಚನೆಯನ್ನು ರದ್ದುಪಡಿಸುವ ಕುರಿತು ಪ್ರಸ್ತಾಪಿಸುವುದು.

೦4. **ಶ್ರೀ ಎಂ.ಎಲ್. ಅನಿಲ್ ಕುಮಾರ್** ಅವರು ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್(ನಿ)ರಲ್ಲಿ 2017-2018 ರಿಂದ 2023-2024ರ ಅವಧಿಯಲ್ಲಿ ನಡೆದಿರುವ ಅವ್ಯವಹಾರ ಮತ್ತು ಹಣ ದುರುಪಯೋಗ ಪ್ರಕರಣಗಳನ್ನು ಲೋಕಾಯುಕ್ತದಿಂದ ತನಿಖೆ ನಡೆಸಿ ಬ್ಯಾಂಕಿನ ಆರ್ಥಿಕ ಸುಸ್ಥಿತಿಗೆ ಕ್ರಮವಹಿಸುವ ಕುರಿತು ಪ್ರಸ್ತಾಪಿಸುವುದು.

೦5. **ಶ್ರೀ ಕೆ.ಎಸ್. ನವೀನ್ ಅವರು** ರಾಜ್ಯದಲ್ಲಿ ಗೌಚರ್, MPS ಮತ್ತು POMPE ಕಾಯಿಲೆಗಳಂತಹ ಅಪರೂಪದ ಕಾಯಿಲೆಗಳಿಂದ ಬಳಲುತ್ತಿರುವ ಮಕ್ಕಳಿಗೆ ಎಂಜೈಮ್ ರೀಪ್ಲೇಸ್‌ಮೆಂಟ್ ಥೆರಪಿ (ERT) ಚಿಕಿತ್ಸೆಗೆ ರಾಷ್ಟ್ರೀಯ ಅಪರೂಪದ ಕಾಯಿಲೆಗಳ ನೀತಿ (NPRD) ಅಡಿಯಲ್ಲಿ ಹೆಚ್ಚುವರಿ ಆರ್ಥಿಕ ಸಹಾಯ ಒದಗಿಸುವ ಕುರಿತು ಪ್ರಸ್ತಾಪಿಸುವುದು.

.4..

೦6. **ಶ್ರೀ ಕಿಶೋರ್ ಕುಮಾರ್ ಪುತ್ತೂರ್** ಅವರು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮದ ಪ್ರಕಾರ ಗ್ರಾಮ ಪಂಚಾಯತಿಗಳಿಗೆ ಪ್ರತಿ ಆರ್ಥಿಕ ವರ್ಷದಲ್ಲಿ ಬಿಡುಗಡೆ ಮಾಡುತ್ತಿರುವ ಶಾಸನಬದ್ಧ ಅನುದಾನವನ್ನು ಹೆಚ್ಚಿಸುವ ಮತ್ತು ಗ್ರಾಮ ಪಂಚಾಯತಿಗಳ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರುಗಳಿಗೆ ನೀಡುತ್ತಿರುವ ಗೌರವಧನ ಮತ್ತು ಸೌಲಭ್ಯಗಳನ್ನು ಹೆಚ್ಚಳ ಮಾಡುವ ಕುರಿತು ಪ್ರಸ್ತಾಪಿಸುವುದು.

೦7. **ಶ್ರೀ ನಿರಾಣಿ ಹಣಮಂತ್ ರುದ್ರಪ್ಪ ಹಾಗೂ ಶ್ರೀ ಪಿ.ಹೆಚ್. ಪೂಜಾರ್** ಅವರುಗಳು ವಿಜಯಪುರ ಜಿಲ್ಲೆ ನಿಡಗುಂದಿ ತಾಲ್ಲೂಕಿನ ಆಲಮಟ್ಟಿಯ ಲಾಲ್‌ಬಹದ್ದೂರ್ ಶಾಸ್ತ್ರಿ ಜಲಾಶಯದ ಎತ್ತರವನ್ನು ಹೆಚ್ಚಿಸಲು ಮಹಾರಾಷ್ಟ್ರ ಸರ್ಕಾರವು ತಕರಾರು ಮಾಡುವ ಮೂಲಕ ತಡೆಯೊಡುತ್ತಿರುವುದರಿಂದ ಕಾನೂನು ಹೋರಾಟದ ಬಗ್ಗೆ ಚರ್ಚಿಸುವ ಕುರಿತು ಪ್ರಸ್ತಾಪಿಸುವುದು.

೦8. **ಶ್ರೀಯುತರುಗಳಾದ ಎಸ್.ವ್ಹಿ. ಸಂಕನೂರ, ಎಸ್.ಎಲ್. ಭೋಜೇಗೌಡ, ಪುಟ್ಟಣ್ಣ, ಶಶೀಲ್ ಜಿ. ನಮೋಶಿ ಹಾಗೂ ಡಾ: ಧನಂಜಯ ಸರ್ಜಿ** ಅವರುಗಳು ಪ್ರಾಥಮಿಕ ಶಾಲೆಯಿಂದ ಪ್ರೌಢ ಶಾಲೆಗೆ, ಪ್ರೌಢ ಶಾಲೆಯಿಂದ ಪದವಿ ಪೂರ್ವ ಕಾಲೇಜುಗಳಿಗೆ 10, 15, 20, 25 ಮತ್ತು 30 ವರ್ಷಗಳ ಸೇವೆ ಸಲ್ಲಿಸಿ, ಪದೋನ್ನತಿ ಹೊಂದುವ ಸಂದರ್ಭದಲ್ಲಿ ಆಗುತ್ತಿರುವ ಅನ್ಯಾಯದ ಕುರಿತು ಪ್ರಸ್ತಾಪಿಸುವುದು.

೦9. **ಶ್ರೀಯುತರುಗಳಾದ ಹೇಮಲತಾ ನಾಯಕ್, ಬಸನಗೌಡ ಬಾದರ್ಲಿ, ಎ. ವಸಂತ ಕುಮಾರ್, ಪುಟ್ಟಣ್ಣ, ಎಂ. ನಾಗರಾಜು, ಡಾ: ಚಂದ್ರಶೇಖರ ಬಸವರಾಜ ಪಾಟೀಲ, ಡಿ.ಟಿ. ಶ್ರೀನಿವಾಸ್(ಡಿ.ಟಿ.ಎಸ್) ಹಾಗೂ ಜಗದೇವ್ ಗುತ್ತೇದಾರ್** ಅವರುಗಳು ಕೊಪ್ಪಳ ಜಿಲ್ಲಾ ಕೇಂದ್ರದಲ್ಲಿ ಬಿಎಸ್‌ಪಿಎಲ್ ಬಾಲ್ಡೋಟಾ ಕಂಪನಿಗೆ ಉಕ್ಕು ಉತ್ಪಾದನಾ ಕಾರ್ಖಾನೆ ನಡೆಸಲು ಸರ್ಕಾರವು ಅನುಮತಿಸಿರುವುದರಿಂದ ಅರಣ್ಯ ನಾಶ, ಕೃಷಿ ಬೆಳವಣಿಗೆ ಕುಂಠಿತ ಹಾಗೂ ಜನ-ಜಾನುವಾರಗಳ ಆರೋಗ್ಯದ ಮೇಲೆ ದುಷ್ಪರಿಣಾಮ ಉಂಟಾಗುತ್ತಿರುವ ಕುರಿತು ಪ್ರಸ್ತಾಪಿಸುವುದು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**